# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯಪಾಲಕ ಅಭಿಯಂತರವರ ಕಛೇರಿ, ಪುಲಿಕೇಶಿನಗರ ಉಪವಿಭಾಗ, ರಾಬರ್ಟಸನ್ಸ್ ರಸ್ತೆ, ಫ್ರೇಜರ್ ಟೌನ್**

ಸ.ಕಾ.ನಿ.ಅ/ಪುನ/ಪಿಆರ್/ 12 /2022-23 ದಿನಾಂಕ: 05-11-2022

**ದಿನಾಂಕ:- 05-11-2022 ರಂದು ವಾರ್ಡ್ ನಂ.78 ರ ವಾರ್ಡ್ ಸಮಿತಿ ಹಾಗೂ ವಾರ್ಡ್ ವಿಪತ್ತು ನಿರ್ವಹಣಾ ಸಮಿತಿಯ ಸಭೆಯ ನಡುವಳಿಗಳು:-**

ವಾರ್ಡ್ ಸಮಿತಿಯ ಸಭೆಯು ಪ್ರಾರಂಭಗೊಳ್ಳುತ್ತಿದಂತೆ ನೋಡಲ್ ಅಧಿಕಾರಿಗಳಾದ ಶ್ರೀ.ಜಿ.ತಿಪ್ಪೇಸ್ವಾಮಿ ರವರು ಕಮಿಟಿ ಸಭೆಯ ಸದಸ್ಯರು ಮತ್ತು ಅಧಿಕಾರಿಗಳನ್ನು ಸ್ವಾಗತಿಸಿದರು.

ಹಿಂದೆ ನಡೆದ ಸಭೆಯಲ್ಲಿ ತಿಳಿಸಲಾಗಿದ ವಿಷಯಗಳ ಬಗ್ಗೆ ಈ ಕೆಳಕಂಡ ಸಭೆಯ ಕಾರ್ಯಸೂಚಿಯಂತೆ ತೆಗೆದು ಕೊಂಡಿರುವ ಕ್ರಮಗಳ ಬಗ್ಗೆ ತಿಳಿಸಲು ಸೂಚಿಸಿರುತ್ತಾರೆ.

1. ವಾರ್ಡ್ ವ್ಯಾಪ್ತಿಯಲ್ಲಿನ ರಾಬರ್ಟ್‌ಸನ್ ರಸ್ತೆ, ಕೆಂಪ್ ರಸ್ತೆ, ರತನ್‌ಸಿಂಗ್ ರಸ್ತೆ, ಕುಮಾರಸ್ವಾಮಿ ನಾಯ್ಡು, ಬಂಬೂ ಬಂಜಾರ್ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ತುರ್ತಾಗಿ ಮುಚ್ಚಲು ಸೂಚಿಲಾಗಿರುತ್ತದೆ.
2. ವಾರ್ಡ್ ವ್ಯಾಪ್ತಿಯಲ್ಲಿನ ಸ್ಟೀಫನ್ಸ್ ರಸ್ತೆ, ಕಾಕ್‌ಬರ್ನ್ ರಸ್ತೆ, ಮಾಸ್ಕ್ ರಸ್ತೆ, 2ನೇ ಅಡ್ಡ ರಸ್ತೆ, ಪ್ರಾಮಿನೆಡ್ ರಸ್ತೆ ಮತ್ತು ಕೆಂಚಪ್ಪ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ತುರ್ತಾಗಿ ಮುಚ್ಚಲು ಸೂಚಿಲಾಗಿರುತ್ತದೆ.
3. ಮುನೇಶ್ವರ ದೇವಸ್ಥಾನ ರಸ್ತೆ, ಬಂಬೂ ಬಜಾರ್ ರಸ್ತೆ, ಮಿಲ್ಲರ್ ರಸ್ತೆ ಮತ್ತು ನೇತಾಜಿ ರಸ್ತೆಯ ಬದಿಯಲ್ಲಿ ಬಿದ್ದಿರುವ ಡೆಬ್ರಿಸ್‌ಅನ್ನು ತೆರವುಗೊಳಿಸಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಸೂಚಿಸಲಾಯಿತು.
4. ವಾರ್ಡ್ ವ್ಯಾಪ್ತಿಯ ನೇತಾಜಿ ಮುಖ್ಯರಸ್ತೆ ಮತ್ತು ಹೇನ್ಸ್ ರಸ್ತೆಯಲ್ಲಿ ಕೈಗೊಂಡಿದ Intensive Cleaning ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು.
5. ಜಿ.ಕೆ.ವೆಲ್ ಪೋಟೋ ಶಾಪ್ ಹತ್ತಿರವಿರುವ ಜಂಕ್ಷನ್ ಬಳಿ ಸಿ.ಸಿ.ಟಿ.ವಿ ಕ್ಯಾಮರ ಅಳವಡಿಸಲು ಸಭೆಯಲ್ಲಿ ಚರ್ಚಿಸಲಾಗಿದ್ದು, ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.
6. ಸ್ಪೇನ್ಸರ್ ರಸ್ತೆಯ ಚರಂಡಿಗಳಲ್ಲಿ ಮಳೆಯಿಂದಾಗಿ ಹೂಳು ತುಂಬಿದ್ದು, ಸದರಿ ಚರಂಡಿಗಳಲ್ಲಿ ಹೂಳು ತೆಗೆಯು ಕಾಮಗಾರಿಯನ್ನು ಕೈಗೊಳ್ಳಲು ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಸೂಚಿಸಲಾಯಿತು.
7. ಮೋರ್ ರಸ್ತೆಯಲ್ಲಿರುವ ಮಾರ್ಕೆಟ್ ಒಳಗಡೆ ಸ್ವಚ್ಛಗೊಳಿಸಲು ಸಂಬಂಧಪಟ್ಟ ವಾರ್ಡಿನ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.
8. ಮೋರ್ ರಸ್ತೆಯ ಮತ್ತು ರಾಬರ್ಟ್‌ಸನ್ ರಸ್ತೆ ಪಾದಚಾರಿ ಮಾರ್ಗಗಳನ್ನು ಅಭಿವೃದ್ಧಿ ಪಡಿಸಲು ಚರ್ಚಿಸಲಾಗಿದ್ದು, ಈ ಬಗ್ಗೆ ಸಂಬಂಧಪಟ್ಟ ವಾರ್ಡಿನ ಅಭಿಯಂತರರಿಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

ನಂತರ ಮುಂದಿನ ಸಭೆಯೊಳಗೆ ವಾರ್ಡ್ ವ್ಯಾಪ್ತಿಯಲ್ಲಿನ ಮಾಹಿತಿಯನ್ನು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ಮಾಹಿತಿಗಳನ್ನು ನೀಡಲು ತಿಳಿಸಿ ಸಭೆಯನ್ನು ಮುಕ್ತಾಯಗೊಳಿಸಲು ಸೂಚಿಸುತ್ತಾ, ಎಲ್ಲರಿಗೂ ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿ** **ನೋಡಲ್ ಅಧಿಕಾರಿಗಳು**

**ಪ್ರತಿಯನ್ನು:**

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಉಪ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ವಿಭಾಗ ರವರ ಅವಗಾಹನೆಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ / ಪುಲಿಕೇಶಿನಗರ) ರವರ ಅವಗಾಹನೆಗಾಗಿ ಕಳುಹಿಸಿದೆ.

Scanned with CamScanner